ಆ) ಹಜ್ ಭವನಕ್ಕಾಗಿ ಮೀಸಲಿಟ್ಟ ಸ್ಥಳ ಹಾಗೂ ಅನುದಾನದ ವಿವರಗಳೇನು?

ಪ್ರೊ. ಡಾ: ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಬೆಂಗಳೂರು ಉತ್ತರ ತಾಲ್ಲೂಕು ಹೆಣ್ಣೂರು ಗ್ರಾಮದ ಸರ್ವೆ ನಂ.30ರಲ್ಲಿ ಹಜ್ ಘರ್ ನಿರ್ಮಾಣಕ್ಕಾಗಿ ಮಂಜೂರಾಗಿರುವ ಜಾಗವು ಸಾರ್ವಜನಿಕ ಉದ್ಯಾನವನಕ್ಕಾಗಿ ಮೀಸಲಾಗಿರುವುದಾಗಿ ಕರ್ನಾಟಕ ಹೈಕೋರ್ಟ್‌ನಲ್ಲಿ ಒಂದು ಪಿಐಎಲ್‌ನ್ನು ಅರ್ಕಾವತಿ ಲೇಔಟ್ ರೆಸಿಡೆಂಟ್ಸ್ ಅಸೋಸಿಯೇಷನ್‌ರವರು ದಾಖಲು ಮಾಡಿದ್ದು. ಇದು ಇನ್ನು ಬಾಕಿಯಿದೆ. ಆದುದರಿಂದ ಹಜ್‌ಘರ್ ನಿರ್ಮಾಣದ ಪ್ರಗತಿ ಕಾರ್ಯಗಳು ಪ್ರಾರಂಭವಾಗಿರುವುದಿಲ್ಲ.

ಆ) ಬೆಂಗಳೂರು ಉತ್ತರ ತಾಲ್ಲೂಕಿನ, ಹೆಣ್ಣೂರು ಗ್ರಾಮದ ಸರ್ವೆ ಸಂಖ್ಯೆ:30ರಲ್ಲಿಯ 5.00 ಎಕರೆ ಜಮೀನನ್ನು ಹಜ್‌ಘರ್ ನಿರ್ಮಾಣಕ್ಕಾಗಿ ರಾಜ್ಯ ಸರ್ಕಾರವು ಮಂಜೂರು ಮಾಡಿರುತ್ತದೆ.

ರಾಜ್ಯ ಸರ್ಕಾರವು ಸದರಿ ಜಾಗವನ್ನು ಖರೀದಿಸಲು ರೂ. 2.25 ಕೋಟಿ ಮತ್ತು ನೋಂದಣಿ ಮುದ್ರಾಂಕ ವೆಚ್ಚ ರೂ. 25.00 ಲಕ್ಷಗಳ ಪೈಕಿ ರೂ.12.50 ಲಕ್ಷಗಳನ್ನು ಮನ್ನಾ ಮಾಡಿದೆ. 2009–10ನೇ ಸಾಲಿನ ಆಯವ್ಯಯದಲ್ಲಿ ಹಜ್‌ಘರ್ ನಿರ್ಮಾಣಕ್ಕಾಗಿ ರೂ. 5.00 ಕೋಟಿಯನ್ನು ಒದಗಿಸಲಾಗಿದೆ.

ಹಿಂದುಳಿದ ವರ್ಗಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸರ್ಕಾರದ ಯೋಜನೆಗಳು

1177 ಶ್ರೀ ಹ್ಯಾರೀಸ್ ಎನ್.ಎ. (ಶಾಂತಿನಗರ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ವರ್ಗಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿರುವ ಯೋಜನೆಗಳು ಯಾವುವು;

ಆ) ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಶುಲ್ಕ ಮತ್ತಿತರ ಅವಶ್ಯಕ ವೆಚ್ಚಗಳಿಗೆ ಆರ್ಥಿಕ ನೆರವನ್ನು ಒದಗಿಸಿ ಕೊಡಲು ಸರ್ಕಾರ ಕೈಗೊಂಡ ಕ್ರಮಗಳೇನು, 2007–08 ಮತ್ತು 2008–09ನೇ ಸಾಲಿನಲ್ಲಿ ಈ ಸಂಬಂಧವಾಗಿ ನೀಡಿದ ಆರ್ಥಿಕ ನೆರವಿನ ಮೊತ್ತ ವೆಷ್ಟು;

ಇ) ರಾಜ್ಯದಲ್ಲಿ ಒಟ್ಟು ಎಷ್ಟು ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ವ್ಯಾಸಂಗಕ್ಕಾಗಿ ಆರ್ಥಿಕ ನೆರವನ್ನು ನೀಡಲಾಗಿದೆ?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು)

ಅ) ಹಿಂದುಳಿದ ವರ್ಗಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿದೆ.

1.	ರಾಜ್ಯ ಹಾಗೂ ಕೇಂದ್ರ ಸರ್ಕಾರದ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ
2.	ರಾಜ್ಯ ಹಾಗೂ ಕೇಂದ್ರ ಸರ್ಕಾರದ ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ
3.	ಶುಲ್ಕ ಮರು ಪಾವತಿ
4.	ಹೆಚ್ಚುವರಿ ಭೋಜನ ವೆಚ್ಚ
5.	ವಿದೇಶಿ ವ್ಯಾಸಂಗಕ್ಕೆ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಬಡ್ಡಿ ರಹಿತ ಸಾಲ ಮಂಜೂರಾತಿ
6.	ಉಪ್ಪಾರ, ದೇವಾಂಗ ಹಾಗೂ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ
7.	ಸರ್ಕಾರಿ ವಿದ್ಯಾರ್ಥಿನಿಲಯಗಳ ನಿರ್ವಹಣೆ
8.	ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಮತ್ತು ಅನಾಥಾಲಯಗಳಲ್ಲಿರುವ ವಿದ್ಯಾರ್ಥಿಗಳಿಗೆ ಸಹಾಯಧನ

ಆ) ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ, ವಿದ್ಯಾರ್ಥಿವೇತನ, ಹೆಚ್ಚುವರಿ ಭೋಜನ ವೆಚ್ಚ ಹಾಗೂ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ಶಿಕ್ಷಣವನ್ನು ಪಡೆಯುವ ವಿದ್ಯಾರ್ಥಿಗಳಿಗೆ ಬಡ್ಡಿ ರಹಿತ ಸಾಲವನ್ನು ನೀಡಲಾಗುತ್ತಿದೆ. ಈ ಸಂಬಂಧವಾಗಿ 2007–08ನೇ ಮತ್ತು 2008–09ನೇ ಸಾಲಿನಲ್ಲಿ ನೀಡಿದ ಆರ್ಥಿಕ ನೆರವಿನ ವಿವರಗಳು ಈ ಕೆಳಕಂಡಂತಿದೆ.

2007–08 (ರೂ. ಲಕ್ಷಗಳಲ್ಲಿ)	**2008–09** (ರೂ. ಲಕ್ಷಗಳಲ್ಲಿ)
1340.54	1110.38

ಇ) ಈವರೆಗೆ ಒಟ್ಟು 18 ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು ನೀಡಲಾಗಿದೆ.